**ಕರ್ನಾಟಕ ಸರ್ಕಾರದ ನಡವಳಿಗಳು.**

**ವಿಷಯ:-** ಶ್ರೀ ನರಸಿಂಗರಾವ್ ಮುತಾಲಿಕ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಶಹಾಪುರ, ಯಾದಗಿರಿ ಜಿಲ್ಲೆ, ಇವರ ಅಮಾನತ್ತು ಅವಧಿಯನ್ನು ಸಕ್ರಮಗೊಳಿಸುವ ಬಗ್ಗೆ.

**ಓದಲಾಗಿದೆ:** 1.ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 125 ವಿಸೇಬಿ 2014, ದಿನಾಂಕ: 07-10-2015
2. ನರಸಿಂಗರಾವ್ ಮುತಾಲಿಕ್, ಇವರ ಮನವಿ ದಿ:19-10-2015.
3. ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಮಾಜಿಕ ಅರಣ್ಯ ವಿಭಾಗ, ಯಾದಗಿರಿ, ಇವರ ಪತ್ರ ದಿ:10-12-2015

------

**ಪ್ರಸ್ತಾವನೆ:**

ಶ್ರೀ ನರಸಿಂಗರಾವ್ ಮುತಾಲಿಕ್, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಸಮಾಜಿಕ ಅರಣ್ಯ ವಿಭಾಗ ಯಾದಗಿರಿ, ಇವರು ಈ ಹಿಂದೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಶಹಾಪೂರ ಯಾದಗಿರಿ ಜಿಲ್ಲೆ, ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನೆಯನ್ನು ಪರಿಣಾಮಕಾರಿಯಾಗಿ ಹಾಗೂ ಪಾರದರ್ಶಕತೆಯಿಂದ ಅನುಷ್ಠಾನಗೊಳಿಸದೆ ಯೋಜನೆಯ ಕಾಮಗಾರಿಗಳಲ್ಲಿ ಅಕ್ರಮ/ ಅವ್ಯವಹಾರ/ ನ್ಯೂನ್ಯತೆ ತಡೆಗಟ್ಟುವಲ್ಲಿ ವಿಫಲರಾಗಿದ್ದಾರೆನ್ನಲಾದ ಕರ್ತವ್ಯಲೋಪ/ದುರ್ನಡತೆ ಆರೋಪಗಳಿಗೆ ಸಂಬಂಧಿಸಿದಂತೆ, ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ: 07-10-2015ರ ಆದೇಶದಲ್ಲಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 8(ii)ರಡಿ ಪ್ರದತ್ತವಾದ ಅಧಿಕಾರದನ್ವಯ "ವಾಗ್ದಂಡನೆ" ವಿಧಿಸಿ ಆದೇಶಿಸಲಾಗಿತ್ತು.

ಮೇಲೆ ಕ್ರಮಸಂಖ್ಯೆ: (2)ರಲ್ಲಿ ಓದಲಾದ ದಿನಾಂಕ: ದಿ:19-10-2015ರ ಪತ್ರದಲ್ಲಿ, ಶ್ರೀ ನರಸಿಂಗರಾವ್ ಮುತಾಲಿಕ್, ಇವರು ಸರ್ಕಾರಕ್ಕೆ ಮನವಿ ಸಲ್ಲಿಸಿ,ದಿನಾಂಕ:30-05-2014 ರಿಂದ 08-04-2015ರ ಅಮಾನತ್ತು ಅವಧಿಯನ್ನು ತಮ್ಮ ಹಕ್ಕಿನಲ್ಲಿರುವ ರಜೆಯೆಂದು ಪರಿಗಣಿಸಿ, ಉಳಿದ ಶೇ. 50ರಷ್ಟು ವೇತನವನ್ನು ಬಿಡುಗಡಗೊಳಿಸಬೇಕೆಂದು ಕೋರಿರುತ್ತಾರೆ.

ಶ್ರೀ ನರಸಿಂಗರಾವ್ ಮುತಾಲಿಕ್ ರವರ ಕೋರಿಕೆ ಬಗ್ಗೆ ಪರಿಶೀಲಿಸಿದೆ.

ಶ್ರೀ ನರಸಿಂಗರಾವ್ ಮುತಾಲಿಕ್, ಇವರ ದಿನಾಂಕ:30-05-2014 ರಿಂದ 08-04-2015ರ ವರೆಗೆ 313ದಿನಗಳ ಅಮಾನತ್ತು ಅವಧಿಯನ್ನು ಅವರ ಹಕ್ಕಿನಲ್ಲಿರುವ 236 ಪರಿವರ್ತಿತ ರಜೆಗಳು ಮತ್ತು 77 ದಿನಗಳು ಗಳಿಕೆ ರಜೆಗಳನ್ನು ಒಟ್ಟು ಸೇರಿ 313 ದಿನಗಳ ಸಂಯುಕ್ತರಜೆಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು 1958ರ ನಿಯಮ 100(7) ರನ್ವಯ ಮಂಜೂರು ಮಾಡಿ, ದಿನಾಂಕ:30-05-2014 ರಿಂದ 08-04-2015ರ ವರೆಗಿನ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು 1958ರ ನಿಯಮ 100ರಡಿಯಲ್ಲಿ ಅಮಾನತ್ತಿನ ಅವಧಿಯನ್ನು ಸಕ್ರಮಗೊಳಿಸಿ ಅವರ ಹಕ್ಕಿನಲ್ಲಿರುವ ರಜೆ/ಅಸಾಧಾರಣ ರಜೆಯೆಂದು ಪರಿಗಣಿಸುವುದು ಸೂಕ್ತವೆಂದು ಸರ್ಕಾರವು ತಿರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 125 ವಿಸೇಬಿ 2014 ಬೆಂಗಳೂರು ದಿನಾಂಕ:01-01-2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ನರಸಿಂಗರಾವ್ ಮುತಾಲಿಕ್, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಸಮಾಜಿಕ ಅರಣ್ಯ ವಿಭಾಗ ಯಾದಗಿರಿ, ಇವರು ಈ ಹಿಂದೆ

..2..

ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಶಹಾಪೂರ ಯಾದಗಿರಿ ಜಿಲ್ಲೆ, ಇವರು ದಿನಾಂಕ:30-05-2014 ರಿಂದ 08-04-2015ರ ವರೆಗಿನ ಅಮಾನತ್ತಿನ ಅವಧಿಯನ್ನು ಅವರ ಹಕ್ಕಿನಲ್ಲಿರುವ 236 ಪರಿವರ್ತಿತ ರಜೆ ಹಾಗೂ 77 ದಿನಗಳು ಗಳಿಕೆರಜೆಯನ್ನು(313ದಿನಗಳು) ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು 1958ರ ನಿಯಮ 100 (7)ರ ಪ್ರಕಾರ ಅವರ ಹಕ್ಕಿನಲ್ಲಿರುವ ರಜೆ/ಅಸಾಧಾರರಣ ರಜೆಯೆಂದು ಪರಿಗಣಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ. ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇ-ಬಿ & ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ:

1. ಮಹಾಲೇಖಪಾಲರು,(ಎ&ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಯಾದಗಿರಿ.
4. ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಮಾಜಿಕ ಅರಣ್ಯ ವಿಭಾಗ ,ಯಾದಗಿರಿ.
5. ಸರ್ಕಾರದ ಅಧೀನ ಕಾರ್ಯದರ್ಶಿ, ಅರಣ್ಯ,ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.
6. ಶ್ರೀ ನರಸಿಂಗರಾವ್ ಮುತಾಲಿಕ್, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಸಮಾಜಿಕ ಅರಣ್ಯ ವಿಭಾಗ ಯಾದಗಿರಿ

**ಪ್ರತಿಯನ್ನು ಮಾಹಿತಿಗಾಗಿ:**

1) ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ ಉಪ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2) ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.